**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ , ನಂಜನಗೂಡು**

**ಸಿ.ಸಿ.111/2026**

**ಫಿರ್ಯಾದಿಃ** ರಾಜ್ಯದ ಪರವಾಗಿ ಬಿಳಿಗೆರೆ ಪೊಲೀಸ್ ಠಾಣೆ

ವಿರುದ್ಧ

**ಆರೋಪಿಃ** ಚಾಮುಂಡಿ ಬಿನ್ ಲೇಟ್ ಮಾದಯ್ಯ 55 ವರ್ಷ,

ವಾಸಃ ಕುಪ್ಪರವಳ್ಳಿ ಗ್ರಾಮ, ನಂಜನಗೂಡು ತಾಲ್ಲೂಕು

**ಃ ಆಪಾದನೆ ಃ**

ಶ್ರೀಮತಿ.ಸರಿತ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆಃ-

ದಿಃ07.01.2026 ರಂದು 14.15 ಗಂಟೆ ಸಮಯದಲ್ಲಿ ಬಿಳಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಕುಪ್ಪರವಳ್ಳಿ ಗ್ರಾಮದ ಬಸ್ಸು ನಿಲ್ದಾಣ ಹತ್ತಿರ ಇರುವ ಪೆಟ್ಟಿಗೆ ಅಂಗಡಿ ಬಳಿ ಸಾರ್ವಜನಿಕ ಸ್ಥಳದಲ್ಲಿ ಆರೋಪಿತರಾದ ನೀವು ಯಾವುದೇ ರಹದಾರಿ/ಪರವಾನಿಗೆ ಇಲ್ಲದೆ ರೂ.200/- ಬೆಲೆ ಬಾಳುವ 90 ಎಂ ಎಲ್ ನ 4 ಒರಿಜಿನಲ್ ಚಾಯ್ಸ ಡಿಲಕ್ಸ ವಿಸ್ಕಿಯ ಪೌಚುಗಳನ್ನು ಅಕ್ರಮವಾಗಿ ಇಟ್ಟುಕೊಂಡು ಸಾರ್ವಜನಿಕರಿಗೆ ಮದ್ಯಸೇವನೆ ಮಾಡಲು ಅನುವು ಮಾಡಿಕೊಟ್ಟಿರುವುದರಿಂದ, ಕರ್ನಾಟಕ ಅಬಕಾರಿ ಕಾಯ್ದೆ ಕಲಂ.15(ಎ) ಮತ್ತು 32(3) ರ ರೀತ್ಯಾ ನಿಮ್ಮ ಮೇಲೆ ಆಪಾದಿಸಲಾಗಿದೆ.

**ಈ ಮೇಲ್ಕಂಡ ಆರೋಪಗಳ ಬಗ್ಗೆ ವಿಚಾರಣೆಗೆ ಈ ಕೆಳಕಂಡಂತೆ ಆದೇಶಿಸುತ್ತೇನೆ.**

ಪ್ರಶ್ನೆ-1 ಃ ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ?

ಉತ್ತರ ಃ

ಪ್ರಶ್ನೆ-2 ಃ ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯೋ? ಅಥವಾ ವಿಚಾರಣೆಯಾಗಬೇಕೋ?

ಉತ್ತರ ಃ

ಮೇಲ್ಕಂಡ ಆಪಾದನೆಗಳನ್ನು ಆರೋಪಿತರಾದ ನಿಮ್ಮನ್ನು ನ್ಯಾಯಾಲಯದ ಅಧಿವಿಚಾರಣೆಯನ್ನು ಎದುರಿಸಬೇಕೆಂದು ಆದೇಶಿಸುತ್ತೇನೆ.

ದಿನಾಂಕಃ*30.01.2026* 1ನೇ ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.

ಸ್ಥಳ ಃ ನಂಜನಗೂಡು ನಂಜನಗೂಡು